# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ :** 2017-18ನೇ ಸಾಲಿಗೆ Integrated Course ಗೆ ಅಲ್ಪಸಂಖ್ಯಾತರ ಕಲ್ಯಾಣ ಇಲಾಖಾ ವತಿಯಿಂದ ಅಲ್ಪಸಂಖ್ಯಾತರದ ವಿದ್ಯಾರ್ಥಿಗಳಿಗೆ ತರಬೇತಿ ನೀಡಲು ಆದೇಶ ಹೊರಡಿಸುವ ಕುರಿತು.

**ಓದಲಾಗಿದೆ:**
1. 2017-18ನೇ ಸಾಲಿನ ಆಯವ್ಯಯ ಭಾಷಣ.
2. ಸರ್ಕಾರದ ಆದೇಶ ಸಂಖ್ಯೆ: ಎಂಡಬ್ಲ್ಯೂಡಿ 193 ಎಂಡಿಎಸ್ 2017 ದಿನಾಂಕ: 20.05.2017
3. ನಿರ್ದೇಶಕರು, ಅಲ್ಪಸಂಖ್ಯಾತರ ನಿರ್ದೇಶನಾಲಯ, ಬೆಂಗಳೂರು ಇವರ ಏಕಕಡತದ ಪ್ರಸ್ತಾವನೆ ಸಂಖ್ಯೆ: ಅಸಂನಿ/ಆಯವ್ಯಯ ಭಾಷಣ-220/ ಸಿಆರ್-03/2017-18 ದಿನಾಂಕ: 13.04.2017.

>>>()<<<

**ಪ್ರಸ್ತಾವನೆ:-**

ಮೇಲೆ(1)ರಲ್ಲಿನ 2017-18 ನೇ ಸಾಲಿನ ತಮ್ಮ ಆಯವ್ಯಯ ಭಾಷಣದ ಕಂಡಿಕೆ 220-H ರಲ್ಲಿ ಸನ್ಮಾನ್ಯ ಮುಖ್ಯಮಂತ್ರಿಯವರು ಈ ಕೆಳಕಂಡಂತೆ ಘೋಷಿಸಿರುತ್ತಾರೆ.

**"ಅಲ್ಪಸಂಖ್ಯಾತ ನಿರುದ್ಯೋಗಿಗಳಿಗೆ ಕೌಶಲ್ಯ ಅಭಿವೃದ್ಧಿ ಯೋಜನೆಯಡಿ ಪತ್ರಿಕೋದ್ಯಮ ತರಬೇತಿ, ಐಐಟಿ,ಐಐಎಂ ಪದವಿ ಮಟ್ಟದಲ್ಲಿ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಸಮಗ್ರ ತರಬೇತಿ ಪಡೆಯುವ ವಿದ್ಯಾರ್ಥಿಗಳಿಗೆ ಪ್ರೋತ್ಸಾಹಧನ ನೀಡಲಾಗುವುದು ಮತ್ತು ಅಲ್ಪಸಂಖ್ಯಾತರ ಸಮುದಾಯದ 1000 ಅಭ್ಯರ್ಥಿಗಳಿಗೆ ಸೇನೆಯಲ್ಲಿ ನೇಮಕಾತಿ ಪಡೆಯುವ ಸಲುವಾಗಿ ಪೂರ್ವಭಾವಿ ತರಬೇತಿ ನೀಡಲಾಗುವುದು."**

ಮೇಲೆ ಓದಲಾದ ಕ್ರಮಸಂಖ್ಯೆ (2)ರಲ್ಲಿನ ಆದೇಶದಲ್ಲಿ 2017-18ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ 219 ರಲ್ಲಿ ಸನ್ಮಾನ್ಯ ಮುಖ್ಯಮಂತ್ರಿಯವರು ಘೋಷಿಸಿರುವಂತೆ ಪ್ರತಿಷ್ಠಿತ ರಾಷ್ಟ್ರೀಯ ಉನ್ನತ ಶಿಕ್ಷಣ ಸಂಸ್ಥೆಗಳಲ್ಲಿ IIT, IIM, IISC, IITs, IIITs, NITs, IIMs, IISERs, AIIMS, AIIMS, NLU, INIs, INI & IuSLA ಕೋರ್ಸ್‌ಗಳಲ್ಲಿ ಪ್ರವೇಶ ಪಡೆದಿರುವ ರಾಜ್ಯದ ಅಲ್ಪಸಂಖ್ಯಾತ ಸಮುದಾಯದ ಮುಸ್ಲಿಂ, ಜೈನ್, ಸಿಖ್, ಬೌದ್ಧರು ಮತ್ತು ಪಾರ್ಸಿ ಜನಾಂಗದ ವಿದ್ಯಾರ್ಥಿಗಳಿಗೆ ಒಂದು ಭಾರಿ ಮಾತ್ರ (ಮೊದಲನೇ ವರ್ಷದಿಂದ ಅಂತಿಮ ವರ್ಷದವರೆಗೆ) ತಲಾ ರೂ.. 2.00 ಲಕ್ಷಗಳ ಪ್ರೋತ್ಸಾಹಧನ ನೀಡಲು ಮಂಜೂರಾತಿ ನೀಡಿ ಆದೇಶಿಸಿದೆ.

ಅಲ್ಪಸಂಖ್ಯಾತರ ಅಭ್ಯರ್ಥಿಗಳಿಗೆ ಸ್ಪರ್ಧಾತ್ಮಕ ಪರೀಕ್ಷೆಗಳಾದ ಕೇಂದ್ರ ಲೋಕ ಸೇವಾ ಆಯೋಗ ಮತ್ತು ಕರ್ನಾಟಕ ಲೋಕ ಸೇವಾ ಆಯೋಗವು ನಡೆಸುವ ಗ್ರೂಪ್ ಎ ಮತ್ತು ಬಿ ಪರೀಕ್ಷೆಗಳಿಗೆ ಪ್ರತಿಷ್ಠಿತ ಖಾಸಗಿ ಸಂಸ್ಥೆಗಳ ಮೂಲಕ ಪರೀಕ್ಷಾ ಪೂರ್ವ ತರಬೇತಿಯನ್ನು ನೀಡಲಾಗುತ್ತಿದೆ. ಪ್ರಸಕ್ತ ಸಾಲಿನಲ್ಲಿ ಪದವಿಯ ಜೊತೆಗೆ ಕೇಂದ್ರ ಹಾಗೂ ರಾಜ್ಯ ಸರ್ಕಾರದ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಪರೀಕ್ಷಾ ಪೂರ್ವ ತರಬೇತಿ ನೀಡುತ್ತಿರುವ Integrated Courseಗೆ ಅಲ್ಪಸಂಖ್ಯಾತ ಸಮುದಾಯದ ವಿದ್ಯಾರ್ಥಿಗಳನ್ನು ನಿಯೋಜಿಸಲು ಉದ್ದೇಶಿಸಿದ್ದು

ಇದರಿಂದ ವಿದ್ಯಾರ್ಥಿಗಳಿಗೆ ಪದವಿ ಕಲಿಕೆಯ ಜೊತೆಯಲ್ಲಿಯೇ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ತರಬೇತಿ ನೀಡುವುದರಿಂದ ಚಿಕ್ಕವಯಸ್ಸಿನಲ್ಲಿಯೇ ವಿದ್ಯಾರ್ಥಿಗಳು ಅಧಿಕಾರಿಗಳಾಗಿ ಆಯ್ಕೆಯಾಗಲು ಸಹಾಯವಾಗುತ್ತದೆ ಇದರೊಂದಿಗೆ ಉತ್ತಮ ಫಲಿತಾಂಶವನ್ನು ನೀಡಬಹುದಾಗಿರುವುದರಿಂದ ಪ್ರಸಕ್ತ ಸಾಲಿನಲ್ಲಿ ಅಲ್ಪಸಂಖ್ಯಾತರ ಸಮುದಾಯಗಳಾದ ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಸಿಖ್ ಬೌದ್ಧ ಮತ್ತು ಪಾರ್ಸಿ ಜನಾಂಗದ ವಿದ್ಯಾರ್ಥಿಗಳನ್ನು Integrated Course ಗಳಲ್ಲಿ ತರಬೇತಿ ನೀಡಲು ಅನುಮತಿ ನೀಡಿ ಆದೇಶ ಹೊರಡಿಲು ಕೋರಿ ನಿರ್ದೇಶಕರು, ಅಲ್ಪಸಂಖ್ಯಾತರ ಕಲ್ಯಾಣ ನಿರ್ದೇಶನಾಲಯ ಇವರು ಮೇಲೆ ಓದಲಾದ ಕ್ರಮ ಸಂಖ್ಯೆ 3ರಲ್ಲಿನ ಏಕಕಡತ ಪದ್ಧತಿಯನ್ವಯ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ.

ಸದರಿ ಪ್ರಸ್ತಾವನೆಯನ್ನು ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: MWD 196 MDS 2017, ದಿನಾಂಕ: 30.06.2017**

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ 2017- 18ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ 220-H ರಲ್ಲಿ ಸನ್ಮಾನ್ಯ ಮುಖ್ಯಮಂತ್ರಿಗಳು ಘೋಷಿಸಿರುವಂತೆ ಅಲ್ಪಸಂಖ್ಯಾತ ಸಮುದಾಯಗಳಾದ ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಸಿಖ್ ಬೌದ್ಧ ಮತ್ತು ಪಾರ್ಸಿ ಜನಾಂಗದ ವಿದ್ಯಾರ್ಥಿಗಳಿಗೆ ಪದವಿ ಪೂರ್ವ ಶಿಕ್ಷಣದ ಜೊತೆಗೆ IIT, IIM ಹಾಗೂ ಇತರೆ ಕೋರ್ಸ್‌ಗಳಿಗೆ ಮತ್ತು ಪದವಿಯ ಜೊತೆಗೆ ಕೇಂದ್ರ ಹಾಗೂ ರಾಜ್ಯ ಸರ್ಕಾರದ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ತರಬೇತಿ ನೀಡುವ Integrated Course ಗಳಿಗೆ ತರಬೇತಿಯನ್ನು ನೀಡಲು ಈ ಕೆಳಕಂಡ ಷರತ್ತುಗಳಿಗೆ ಒಳಪಟ್ಟು ಮಂಜೂರಾತಿ ನೀಡಿ ಆದೇಶಿಸಿದೆ.

**ಷರತ್ತುಗಳು:**

1) ಪ್ರತಿಷ್ಠಿತ ಖಾಸಗಿ ಸಂಸ್ಥೆಗಳಲ್ಲಿ ಮೂಲಕ IIT, IIM, IISC, IITs, IIITs, NITs, IIMs, IISERs, AIIMS, AIIMS, NLU, INIs, INI & IuSLAs ಹಾಗೂ Super-30 ಕೋರ್ಸ್‌ಗಳಿಗೆ ಪದವಿ ಪೂರ್ವ ವಿದ್ಯಾಭ್ಯಾಸದ ಜೊತೆಗೆ Integrated ತರಬೇತಿ ನೀಡುವುದು.
2) ಪ್ರತಿಷ್ಠಿತ ಖಾಸಗಿ ಸಂಸ್ಥೆಗಳಲ್ಲಿ ಪದವಿಯಲ್ಲಿ ವ್ಯಾಸಂಗ ಮಾಡುತ್ತಿರುವ ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಗೆ ಕೇಂದ್ರ ಮತ್ತು ರಾಜ್ಯ ಸರ್ಕಾರದ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ತರಬೇತಿ ನೀಡುವಂತಹ ಸಂಸ್ಥೆಗಳನ್ನು ನಿಯೋಜಿಸತಕ್ಕದ್ದು.
3) ಈ ಯೋಜನೆಗೆ ಆನ್‌ಲೈನ್ ಮೂಲಕ ಅರ್ಜಿಯನ್ನು ಆಹ್ವಾನಿಸಿ ವಿದ್ಯಾರ್ಥಿಗಳನ್ನು ಆಯ್ಕೆ ಮಾಡಲು ನಿರ್ದೇಶಕರು, ಅಲ್ಪಸಂಖ್ಯಾತರ ನಿರ್ದೇಶನಾಲಯ ಬೆಂಗಳೂರು ರವರು ಕ್ರಮವಹಿಸತಕ್ಕದ್ದು.